ದಿಃ 21.07.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯವಿಚಾರಣೆಃ ವಾದಿ ಪರ ಶ್ರೀ ವೈ.ಜೆ.ಆರ್ ವಕೀಲರಿಂದ ,**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿದ್ದು, ಅದನ್ನು ನಾನೇ ಹೇಳಿ ಬರೆಸಿದ್ದೇನೆ ಹಾಗೂ ಪ್ರಮಾಣ ಪತ್ರಕ್ಕೆ ನಾನೇ ಸಹಿ ಮಾಡಿರುತ್ತೇನೆ.

ನಾನು ನಿಪಿ–05 ಮರಣ ಶಾಸನ ಪತ್ರವನ್ನು ನಾನೇ ಬರೆದಿರುತ್ತೇನೆ. ನಿಪಿ–05 ಪತ್ರಕ್ಕೆ ನಾನು ಸಾಕ್ಷಿದಾರನಾಗಿ ರಂಗನಾಥ .ಎಸ್ ಮತ್ತು ಕೃಷ್ಣೋಜೀರಾವ್ ರವರು ಸಾಕ್ಷಿದಾರರಾಗಿ ಸಹಿ ಮಾಡಿರುತ್ತಾರೆ ಸಾಕ್ಷಿಯು ಸದರಿ ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿಂದ್ದು ಅದನ್ನು **ಈಗಾಗಲೇ ನಿಪಿ–05(ಎ) ಮತುತ ನಿಪಿ–05(ಬಿ)** ಎಂದು ಗುರುತಿಸಲಾಗಿದೆ. ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು **ನಿಪಿ–05(ಸಿ)** ಎಂದು ಗುರುತಿಸಲಾಯಿತು. ನಿಪಿ–05 ಕ್ಕೆ ಮಾಯಮ್ಮ ಹೆಬ್ಬೆಟ್ಟು ಗುರುತನ್ನು ಹಾಕಿರುತ್ತಾರೆ. ಸಾಕ್ಷಿಯು ಮಾಯಮ್ಮನವರ ಹೆಬ್ಬೆಟ್ಟು ಗುರುತನ್ನು ನೋಡಿ ಗುರುತಿಸಿದ್ದು ಅದನ್ನು **ನಿಪಿ–05(ಡಿ)** ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗೆ ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.**

*(ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)*

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

*(ರಾಘವೇಂದ್ರ. ಡಿ.)*
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಭದ್ರಾವತಿ